**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಧಾನ ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯದಲ್ಲಿ, ತರೀಕೆರೆ.**

**ಸಿ.ಸಿ. 1524/2023**

ಫಿರ್ಯಾದುದಾರರು ಃ ಸರ್ಕಾರದ ಪರವಾಗಿ ತರೀಕೆರೆ ಪೊಲೀಸರಿಂದ

-ವಿರುದ್ಧ-

ಆರೋಪಿ/ತರು ಃ ನಾಗರಾಜ ಮತ್ತು ಇತರರು

-ಃದೋಷಾರೋಪಣೆಃ-

ಶ್ರೀ ವೈದ್ಯ ಶ್ರೀಕಾಂತ್, ಬಿ.ಎಸ್ಸಿ, ಎಲ್.ಎಲ್.ಬಿ., ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಧಾನ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ತರೀಕೆರೆ ಆದ ನಾನು ಈ ಕೆಳಗೆ ಕಾಣಿಸಿರುವಃ

1. ನಾಗರಾಜ ಬಿನ್ ಭೈರಪ್ಪ, 58 ವರ್ಷ, ವ್ಯವಸಾಯ, ವಾಸಃಬೆಟ್ಟತಾವರೆಕೆರೆ ಗ್ರಾಮ, ತರೀಕೆರೆ ತಾಃ
2. ರುದ್ರಮ್ಮ ಕೋಂ ನಾಗರಾಜ, 55 ವರ್ಷ, ಗೃಹಿಣಿ, ವಾಸಃಬೆಟ್ಟತಾವರೆಕೆರೆ ಗ್ರಾಮ, ತರೀಕೆರೆ ತಾಃ
3. ರುದ್ರೇಶ ಬಿನ್ ನಾಗರಾಜ, 34 ವರ್ಷ, ವ್ಯವಸಾಯ, ವಾಸಃಬೆಟ್ಟತಾವರೆಕೆರೆ ಗ್ರಾಮ, ತರೀಕೆರೆ ತಾಃ

ಆದ ನಿಮ್ಮ ವಿರುದ್ಧ ಈ ಕೆಳಗಿನಂತೆ ಹೊರಿಸಿರುವ ದೋಷಾರೋಪಣೆ ಎಂದರೆಃ

ದಿಃ16.05.2023 ರಂದು ಮಧ್ಯಾಹ್ನ 1-00 ರ ಸಮಯದಲ್ಲಿ ತರೀಕೆರೆ ಪೊಲೀಸ್ ಠಾಣಾ ಸರಹದ್ದಿನ ಬೆಟ್ಟತಾವರೆಕೆರೆ ಗ್ರಾಮದ ಅಂತರಘಟ್ಟಮ್ಮ ದೇವಸ್ಥಾನದ ಬಲಭಾಗದ ಕಾಂಪೌಂಡ್ ಪಕ್ಕದ ರಸ್ತೆಯಲ್ಲಿ ಚಾಸಾ-1 ಮತ್ತು 2 ರವರು ಸಿದ್ದರಹಳ್ಳಿ ಗ್ರಾಮದ ಸರ್ವೆ ನಂ.44 ರಲ್ಲಿರುವ ತೆಂಗಿನ ತೋಟವು ಚಾಸಾ-1 ರವರ ಯಜಮಾನರ ಅಣ್ಣ ತಮ್ಮಂದಿರ ಬಾಬ್ತು ಜಮೀನು, ಇವರ ಸಂಬಂಧಿಕರಾದ ಭೈರಪ್ಪರವರ ಹೆಸರಿನಲ್ಲಿದ್ದು, ಒಟ್ಟು ಕುಟುಂಬದ ಆಸ್ತಿ ಆಗಿದ್ದು, ಪಾಲು ಪಾರಿಕತ್ತು ಆಗಿರುವುದಿಲ್ಲ, ಸದರಿ ದಿನ ಆರೋಪಿತರಾದ ನೀವುಗಳು ಸೇರಿಕೊಂಡು ತೆಂಗಿನತೋಟದ ತೆಂಗಿನ ಗರಿಗಳಿಗೆ ಬೆಂಕಿ ಹಚ್ಚಿದರೆಂದು, ಚಾಸಾ-1 ಮತ್ತು 2 ರವರು ತಮ್ಮ ಮನೆಯ ಮುಂದೆ ರಸ್ತೆ ಮೇಲೆ ನಿಂತು, ಏನುಕ್ಕೆ ತೋಟಕ್ಕೆ ಬೆಂಕಿ ಹಾಕಿದ್ದೀರಾ ಎಂದು ಆರೋಪಿತರಾದ ನಿಮಗೆ ಕೇಳಿದ್ದಕ್ಕೆ 2 ಮತ್ತು 3 ನೇ ಆರೋಪಿತರಾದ

ನೀವುಗಳು ಚಾಸಾ-1 ಮತ್ತು 2 ರವರಿಗೆ ತಲೆ ಕೂದಲು ಹಿಡಿದು ಎಳೆದಾಡಿ ಅವರ ಮಾನಕ್ಕೆ ಅವಮಾನವನ್ನುಂಟು ಮಾಡಿದ್ದು, ಆ ಮೂಲಕ ನೀವು ಭಾರತೀಯ ದಂಡ ಸಂಹಿತೆಯ ಕಲಂ.**354** ಸಹಕಲಂ.**34** ರ ರೀತ್ಯಾ ಅಪರಾಧವನ್ನು ನ್ಯಾಯಾಲಯದ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಮೇಲ್ಕಂಡ ಸ್ಥಳ, ದಿನಾಂಕ, ಮತ್ತು ಸಮಯದಲ್ಲಿ ಆರೋಪಿತರಾದ ನೀವು ಚಾಸಾ-1 ರಿಂದ 3 ರವರಿಗೆ ಅವಾಚ್ಯವಾಗಿ ಬೈದಿದ್ದು, ಆ ಮೂಲಕ ನೀವು ಭಾರತೀಯ ದಂಡ ಸಂಹಿತೆಯ ಕಲಂ.**504** ಸಹಕಲಂ.**34** ರ ರೀತ್ಯಾ ಅಪರಾಧವನ್ನು ನ್ಯಾಯಾಲಯದ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಮೇಲ್ಕಂಡ ಸ್ಥಳ, ದಿನಾಂಕ, ಮತ್ತು ಸಮಯದಲ್ಲಿ ಆರೋಪಿತರಾದ ನೀವು ಚಾಸಾ-1 ಮತ್ತು 2 ರವರಿಗೆ ಹೊಡೆದು ಸಾಮಾನ್ಯ ಸ್ವರೂಪದ ನೋವುಂಟು ಮಾಡಿದ್ದು, ಆ ಮೂಲಕ ನೀವು ಭಾರತೀಯ ದಂಡ ಸಂಹಿತೆಯ ಕಲಂ.**323** ಸಹಕಲಂ.**34** ರ ರೀತ್ಯಾ ಅಪರಾಧವನ್ನು ನ್ಯಾಯಾಲಯದ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಮೇಲ್ಕಂಡ ಸ್ಥಳ, ದಿನಾಂಕ, ಮತ್ತು ಸಮಯದಲ್ಲಿ ಆರೋಪಿತರಾದ ನೀವು ಚಾಸಾ-1 ಮತ್ತು 2 ರವರಿಗೆ ಕೋಲಿನಿಂದ ಹೊಡೆದು ಸಾಮಾನ್ಯ ಸ್ವರೂಪದ ಗಾಯವನ್ನುಂಟು ಮಾಡಿದ್ದು, ಆ ಮೂಲಕ ನೀವು ಭಾರತೀಯ ದಂಡ ಸಂಹಿತೆಯ ಕಲಂ.**324** ಸಹಕಲಂ.**34** ರ ರೀತ್ಯಾ ಅಪರಾಧವನ್ನು ನ್ಯಾಯಾಲಯದ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಮೇಲ್ಕಂಡ ಸ್ಥಳ, ದಿನಾಂಕ, ಮತ್ತು ಸಮಯದಲ್ಲಿ ಆರೋಪಿತರಾದ ನೀವು ಚಾಸಾ-1 ರಿಂದ 3 ರವರಿಗೆ ಜೀವ ಬೆದರಿಕೆ ಹಾಕಿದ್ದು, ಆ ಮೂಲಕ ನೀವು ಭಾರತೀಯ ದಂಡ ಸಂಹಿತೆಯ ಕಲಂ.**506** ಸಹಕಲಂ.**34** ರ ರೀತ್ಯಾ ಅಪರಾಧವನ್ನು ನ್ಯಾಯಾಲಯದ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಈ ಆರೋಪಗಳ ಮೇಲೆ ನೀವು ಈ ನ್ಯಾಯಾಲಯದ ಆರೋಪ ವಿಚಾರಣೆಗೆ ಗುರಿಯಾಗತಕ್ಕದ್ದೆಂದು ನಾನು ಈ ಮೂಲಕ ನಿರ್ದೇಶಿಸುತ್ತೇನೆ.

ದಿಃ19.05.2025

Sd/-

ಹಿ. ಪ್ರಧಾನ ಪ್ರದನ್ಯಾದಂ, ತರೀಕೆರೆ.

ಪ್ರಃ 1) ನಿಮಗೆ ತಿಳಿಯುವಂತಹ ಭಾಷೆಯಲ್ಲಿ ಓದಿ ಹೇಳಲಾದ ಆರೋಪಣೆಯನ್ನು ನೀವು ಕೇಳಿ ತಿಳಿದುಕೊಂಡಿರುವಿರಾ?

ಉಃ ಎ-1
ಎ-2
ಎ-3

ಪ್ರಃ 2) ಸದರಿ ಆರೋಪಣೆಗಳನ್ನು ನೀವು ಒಪ್ಪಿಕೊಳ್ಳುತ್ತೀರಾ ಅಥವಾ ನಿರಾಕರಿಸುತ್ತೀರಾ?

ಉಃ ಎ-1
ಎ-2
ಎ-3

(ಆರೋಪವನ್ನು ಆರೋಪಿತರಿಗೆ ಓದಿ ಹೇಳಿ ಅವರು ಕೊಟ್ಟ ಉತ್ತರವನ್ನು ನಾನೇ ಸ್ವತಃ ಬರೆದುಕೊಂಡಿರುವುದು ನಿಜ ಮತ್ತು ಸತ್ಯವಾಗಿದೆ ಎಂದು ಈ ಮೂಲಕ ದೃಢೀಕರಿಸುತ್ತೇನೆ)

ದಿನಾಂಕಃ19.05.2025

Sd/-
ಹಿ. ಪ್ರಧಾನ ಪ್ರ.ದ.ನ್ಯಾ.ದಂ ತರೀಕೆರೆ.

ಆರೋಪಿತರ ಸಹಿಃ